ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಒಂಭತ್ತನೇ ಅಧಿವೇಶನ

(ಮುಂದುವರೆದ ಉಪವೇಶನ)

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 15ನೇ ಮಾರ್ಚ್, 2021

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹತ್ತನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹತ್ತನೇ ಪಟ್ಟಿ

2. ವಿತ್ತೀಯ ಕಾರ್ಯಕಲಾಪಗಳು

2021–22ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ.

3. ಶಾಸನ ರಚನೆ

<u>ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು</u>

1. ಶ್ರೀ ಎಸ್.ಟಿ. ಸೋಮಶೇಖರ್ (ಮಾನ್ಯ ಸಹಕಾರ ಸಚಿವರು) ಅವರು:–

ಅ) 2021ನೇ ಸಾಲಿನ ಕರ್ನಾಟಕ ಸೊಸೈಟಿಗಳ ನೋಂದಣಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಶ್ರೀ ಎಸ್.ಟಿ. ಸೋಮಶೇಖರ್ (ಮಾನ್ಯ ಸಹಕಾರ ಸಚಿವರು) ಅವರು:–

ಅ) 2021ನೇ ಸಾಲಿನ ಕರ್ನಾಟಕ ಲೇವಾದೇವಿದಾರರ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. ಶ್ರೀ ಎನ್. ನಾಗರಾಜ (ಎಂ.ಟಿ.ಬಿ.) (ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು) ಅವರು:–

ಅ) 2021ನೇ ಸಾಲಿನ ಕರ್ನಾಟಕ ಪೌರಸಭೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

..2/

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಸಿದ್ದರಾಮಯ್ಯ, ಕೆ.ಆರ್. ರಮೇಶ್ ಕುಮಾರ್, ಕೃಷ್ಣಬೈರೇಗೌಡ, ಡಾ. ಅಜಯ್ ಧರ್ಮಸಿಂಗ್, ಹೆಚ್.ಪಿ. ಮಂಜುನಾಥ್ ಹಾಗೂ ಇತರರು** – ರಾಜ್ಯದಲ್ಲಿ ಪೆಟ್ರೋಲ್, ಡೀಸಲ್, ಅಡುಗೆ ಅನಿಲ ಮತ್ತು ಜೀವನಾವಶ್ಯಕ ವಸ್ತುಗಳ ಬೆಲೆ ಏರಿಕೆಯನ್ನು ತಡೆಗಟ್ಟುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

2) **ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಬಂಡೆಪ್ಪ ಖಾಶೆಂಪೂರ್, ಕೆ.ಎಂ. ಶಿವಲಿಂಗೇಗೌಡ, ಆರ್. ಮಂಜುನಾಥ್ ಹಾಗೂ ಇತರರು** – ಮಾಯನೂರು ಜಲಾಶಯವನ್ನು ಗುಂಡಾರು, ದಕ್ಷಿಣ ವೆಲ್ಲೂರು ಮತ್ತು ವೈಗಾಯಿ ನದಿಗಳೊಂದಿಗೆ ಜೋಡಣೆ ಮಾಡುವ ನಿರ್ಮಾಣ ಕಾರ್ಯದಿಂದಾಗಿ ಉಂಟಾಗಿರುವ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

5. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ನಿಸರ್ಗ ನಾರಾಯಣ ಸ್ವಾಮಿ ಎಲ್.ಎನ್. ಅವರು** – ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹೆಚ್ಚಾಗಿರುವ ಶುದ್ಧ ಕುಡಿಯುವ ನೀರಿನ ಸಮಸ್ಯೆಯ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

2) **ಶ್ರೀ ಡಿ. ವೇದವ್ಯಾಸ ಕಾಮತ್ ಅವರು** – ಮೇಲ್ವರ್ಗದ ಬಡವರಿಗೆ ನೀಡಲಾಗುವ ಮೀಸಲಾತಿ ಸೌಲಭ್ಯವನ್ನು ಗೌಡ ಸಾರಸ್ವತ ಬ್ರಾಹ್ಮಣ ಜಾತಿಯ ಅರ್ಹರು ಸಹ ಪಡೆಯಲು ಅನುಕೂಲವಾಗುವಂತೆ ಜಾತಿ ಪ್ರಮಾಣ ಪತ್ರವನ್ನು ನೀಡುವ ಬಗ್ಗೆ ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

3) **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು** – ಗ್ರಾಮ ಪಂಚಾಯಿತಿಗಳಲ್ಲಿ ಕರ್ತವ್ಯ ನಿರ್ವಹಿಸುವ ಬಿಲ್ ಕಲೆಕ್ಟರ್‌ಗಳು ಕರ್ತವ್ಯ ನಿರ್ವಹಣೆಗಿಂತ ಹೆಚ್ಚಿನ ಸಮಯವನ್ನು ರಾಜಕೀಯ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವುದರಿಂದ ಅವರುಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

4) **ಶ್ರೀ ದೊಡ್ಡನಗೌಡ ಜಿ. ಪಾಟೀಲ್ ಅವರು** – ಹುನಗುಂದ ತಾಲ್ಲೂಕಿನ ಪೂರ್ವ ಭಾಗದ ರೈತರುಗಳ ಜಮೀನುಗಳಿಗೆ ನೀರಾವರಿ ಸೌಲಭ್ಯವನ್ನು ಒದಗಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

5) **ಶ್ರೀ ದೊಡ್ಡಗೌಡರ ಮಹಾಂತೇಶ್ ಬಸವಂತರಾಯ್ ಅವರು** – ಬೆಳಗಾವಿ ಜಿಲ್ಲೆಯಲ್ಲಿ ಭೀಕರ ಮಳೆ ಮತ್ತು ಪ್ರವಾಹದಿಂದ ಶಿಥಿಲಾವಸ್ಥೆಗೊಂಡಿರುವ ಶಾಲೆಗಳ ಪುನರ್ ನಿರ್ಮಾಣಕ್ಕೆ ಜಿಲ್ಲಾಧಿಕಾರಿಗಳ ಖಾತೆಯಲ್ಲಿರುವ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

6) **ಶ್ರೀ ಟಿ.ಡಿ. ರಾಜೇಗೌಡ ಅವರು** – ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ಕರ್ನಾಟಕ ವಸತಿ ಶಿಕ್ಷಣ ನಿರ್ದೇಶನಾಲಯವನ್ನಾಗಿ ಮಾರ್ಪಡಿಸಿ ಅದರಡಿಯಲ್ಲಿ ಬರುವ ವಿವಿಧ ವಸತಿ ಶಾಲೆಗಳು ಹಾಗೂ ಅದರಲ್ಲಿ ವಿವಿಧ ಪದವಿ ಪೂರ್ವ ಕಾಲೇಜುಗಳನ್ನು ಜವಾಹರ್ ನವೋದಯ ವಿದ್ಯಾಲಯದ ಮಾದರಿಯಲ್ಲಿ ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

7) **ಶ್ರೀ ಕೆ.ವೈ. ನಂಜೇಗೌಡ ಅವರು** – ಗಂಗಾಕಲ್ಯಾಣ ಯೋಜನೆಯಡಿ ಕೊರೆದಿರುವ ಕೊಳವೆ ಬಾವಿಗಳಿಗೆ ಪಂಪ್ ಮೋಟಾರ್ ಅಳವಡಿಸಿ, ವಿದ್ಯುತ್ ಸಂಪರ್ಕ ಕಲ್ಪಿಸುವ ಬಗ್ಗೆ ಹಾಗೂ ಸಂಪರ್ಕವನ್ನು ಕಲ್ಪಿಸಲು ವಿಳಂಬ ಮಾಡಿದವರ ಮೇಲೆ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

8) **ಶ್ರೀ ವಿ. ಮುನಿಯಪ್ಪ ಅವರು** – ವಿವಿಧ ವಸತಿ ಶಾಲೆಗಳಲ್ಲಿ, ವಿದ್ಯಾರ್ಥಿ ನಿಲಯಗಳಲ್ಲಿ, ಆಶ್ರಮ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರುಗಳಿಗೆ ವೇತನ ನೀಡುವ ಬಗ್ಗೆ ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

9) **ಶ್ರೀ ಯಶವಂತರಾಯ ವಿಠ್ಠಲಗೌಡ ಪಾಟೀಲ ಅವರು** – ಶಿಕ್ಷಣ ಹಕ್ಕು ಕಾಯ್ದೆಯನ್ನು (ಆರ್.ಟಿ.ಇ.) ಪದವಿ ಪೂರ್ವ ಶಿಕ್ಷಣದವರೆಗೆ ವಿಸ್ತರಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

10) **ಶ್ರೀ ಶರತ್ ಬಚ್ಚೇಗೌಡ ಅವರು** – ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಅಂತರ್ಜಲ ಮಟ್ಟ ಕುಸಿತದಿಂದ ಗ್ರಾಮೀಣ ಭಾಗದ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆ ಉಂಟಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

11) **ಡಾ॥ ಯತೀಂದ್ರ ಸಿದ್ದರಾಮಯ್ಯ ಅವರು** – ಅನುದಾನ ಕೊರತೆಯಿಂದಾಗಿ ಸ್ಥಗಿತಗೊಂಡಿರುವ ಭವನಗಳ ಕಾಮಗಾರಿಯನ್ನು ಪ್ರಾರಂಭ ಮಾಡಲು ಅಗತ್ಯವಿರುವ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

..4/

12) **ಶ್ರೀ ಹೆಚ್.ಡಿ. ರೇವಣ್ಣ ಅವರು** – ಹಾಸನ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿನ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

13) **ಶ್ರೀ ಆರಗ ಜ್ಞಾನೇಂದ್ರ ಅವರು** – ಶಿವಮೊಗ್ಗ ಜಿಲ್ಲೆಯ ಹೊಸ ನಗರ ತಾಲ್ಲೂಕಿನ ನಗರ ಹೋಬಳಿಯಲ್ಲಿ ಭೂದಾಖಲೆಗಳಲ್ಲಿ ಸೂಚಿತ ಅರಣ್ಯವೆಂದು ನಮೂದಾಗಿರುವುದರಿಂದ ಈ ಭಾಗದ ನಿವಾಸಿಗಳು ಕಂದಾಯ ಜಮೀನಿನಲ್ಲಿ ನಿರ್ಮಿಸಿರುವ ಮನೆಯ ಹಾಗೂ ಬಗರ್ ಹುಕುಂ ಸಾಗುವಳಿ ಮಾಡಿದ ಜಮೀನಿನ ಹಕ್ಕು ಪತ್ರಗಳನ್ನು ಪಡೆಯಲು ಅನಾನುಕೂಲ ಉಂಟಾಗಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm